ಸಾಗುವಳಿಯನ್ನು ಸಕ್ರಮಗೊಳಿಸಿ ಮಂಜೂರು ಮಾಡಲು ಅವಕಾಶವಿರುವುದಿಲ್ಲ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಯು.ಡಿ.ಡಿ. 92 ಎಮ್.ಎನ್.ವೈ. 2006 ದಿನಾಂಕ : 16–01–2007ರಲ್ಲಿ ವಿಸ್ತರಿಸಿರುವುದರಿಂದ, ಈ ವ್ಯಾಪ್ತಿಯಲ್ಲಿ ಬರುವ ಗೋಮಾಳ ಜಮೀನು ಒಳಗೊಂಡಂತೆ ಸರ್ಕಾರಿ ಜಮೀನುಗಳ ಸಕ್ರಮೀಕರಣ ಕೋರಿ ಸಲ್ಲಿಸಲಾಗಿರುವ ಬಾಕಿ ಅರ್ಜಿಗಳನ್ನು ಕರ್ನಾಟಕ ಭೂ ಕಂದಾಯ ಕಾಯ್ದೆಯ ಕಲಂ 94ಎ(4) ರನ್ವಯ ಪರಿಶೀಲಿಸಿ ಇತ್ಯರ್ಥ ಪಡಿಸಬೇಕಾಗುತ್ತದೆ.

ಆ) ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94ಎ ಮತ್ತು ಬಿ ರಡಿಯಲ್ಲಿ ಸದರಿ ಅರ್ಜಿಗಳನ್ನು ಪರಿಶೀಲಿಸಿ ತೀರ್ಮಾನ ಕೈಗೊಳ್ಳುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಮೇಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

ಸರ್ಕಾರಿ ಜಾಗಗಳಲ್ಲಿ ಮನೆಗಳನ್ನು ಕಟ್ಟಿಕೊಂಡಿರುವುದನ್ನು ಸಕ್ರಮಗೊಳಿಸುವದು

650 (426) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸರ್ಕಾರಿ ಜಾಗಗಳಲ್ಲಿ ಮನೆಗಳನ್ನು ಕಟ್ಟಿಕೊಂಡು ವಾಸಮಾಡುತ್ತಿರುವ ಕಡು ಬಡವರಿಗೆ ನಿಯಮ 94ಸಿ ಪ್ರಕಾರ ಸಕ್ರಮಗೊಳಿಸಲಾಗುವದೇ ;

ಆ) ಹಾಗಿದ್ದಲ್ಲಿ, ಅನೇಕ ಅನಕ್ಷರಸ್ತರು ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸದೇ ಇರುವುದರಿಂದ ಇಂತಹ ಬಡ ಫಲಾನುಭವಿಗಳಿಗೆ ಅರ್ಜಿ ಹಾಕಲು ಕಾಲಾವಕಾಶ ನೀಡಲಾಗುತ್ತಿದೆಯೇ ;

ಇ) ಹಾಗಿಲ್ಲದಿದ್ದಲ್ಲಿ, ಇಂತಹ ಸುಮಾರು 20 ವರ್ಷಗಳಿಗಿಂತಲೂ ಹೆಚ್ಚು ಕಾಲದಿಂದ ಸರ್ಕಾರಿ ಜಾಗಗಳಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವವರಿಗೆ ಮನೆಗಳನ್ನು ಸಕ್ರಮ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಡಿ. ವಿ. ಸದಾನಂದಗೌಡ (ಮಾನ್ಯ ಮುಖ್ಯಮಂತ್ರಿಗಳು):–

ಅ) ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94ಸಿ ಪ್ರಕಾರ ಸರ್ಕಾರಿ

ಜಮೀನುಗಳಲ್ಲಿ ದಿನಾಂಕ : 14–04–1998ರ ಪೂರ್ವದಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವವರು ಸಕ್ರಮೀಕರಣ ಕೋರಿ ದಿನಾಂಕ : 31–12–2001ರೊಳಗೆ ಅರ್ಜಿ ಹಾಕಿಕೊಂಡಿದ್ದಲ್ಲಿ ಅಂತಹ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಆ) ಇಲ್ಲ.

ಇ) ಮೇಲಿನ ಪ್ರಶ್ನೆಗಳಿಗೆ ನೀಡಿರುವ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಮತ್ತು ಇನ್‌ಕ್ಯೂಬಿಲೇಟರ್ ಅಳವಡಿಸುವ ಬಗ್ಗೆ

651 (427) ಶ್ರೀ ವಿಶ್ವನಾಥ್ ಎಸ್.ಆರ್. (ಯಲಹಂಕ):–

ಶ್ರೀ ಜೆ. ನರಸಿಂಹಸ್ವಾಮಿ (ದೊಡ್ಡಬಳ್ಳಾಪುರ) :– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಡಯಾಲಿಸಿಸ್ ಖಾಯಿಲೆಯಿಂದ ಬಳಲುತ್ತಿರುವ ಬಡ ರೋಗಿಗಳು ಗ್ರಾಮಾಂತರ ಪ್ರದೇಶಗಳಲ್ಲಿ ವಾಸ ಮಾಡುತ್ತಿದ್ದು ಡಯಾಲಿಸಿಸ್ ಮಾಡಿಸಲು ನಗರ ಪ್ರದೇಶಗಳ ಆಸ್ಪತ್ರೆಗಳಿಗೆ ಹೋಗಿ ಬರಲು ತೊಂದರೆಯಾಗುತ್ತಿರುವುದು ಸರ್ಕಾರಿ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ವಿಧಾನ ಸಭಾ ಕ್ಷೇತ್ರದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ತೆರೆಯಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

ಇ) ಈ ಕೇಂದ್ರಗಳನ್ನು ಯಾವಾಗ ತೆರೆಯಲಾಗುವುದು.

ಈ) ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗಳಲ್ಲಿ ಅವಧಿಗೆ ಮುನ್ನ ಜನಿಸುವ ಶಿಶುಗಳನ್ನು (7 ರಿಂದ 8 ತಿಂಗಳ ಅವಧಿ) ಇನ್‌ಕ್ಯೂಬಿಲೇಟರ್‌ಗಳಲ್ಲಿ 30 ದಿನಗಳಿಗಿಂತಲೂ ಹೆಚ್ಚು ಕಾಲ ಇಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಕೂಲಿ ಮಾಡಿ ಜೀವನ ನಿರ್ವಹಿಸುತ್ತಿರುವ ಕಡು ಬಡವರಿಗೆ ಬಹಳ